ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ , ನೃಪತುಂಗ ರಸ್ತೆ, ಬೆಂಗಳೂರು-01**

ದಿನಾಂಕ:13-04-2022

ಸಂಖ್ಯೆ:ಸಿ1(5)ಸ್ಥಾಪಬಡ್ತಿ/6/2022-23

## ಅಧಿಸೂಚನೆ

**ವಿಷಯ:**-ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರೌಢಶಾಲಾ ಸಹ ಶಿಕ್ಷಕರಿಗೆ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು/ತತ್ಸಮಾನ ಗ್ರೂಪ್-ಬಿ ವೃಂದಕ್ಕೆ ಸ್ಥಾನಪನ್ನ ಬಡ್ತಿ ನೀಡುವ ಕುರಿತು.

**ಉಲ್ಲೇಖ**:-1.ನಿರ್ದೇಶಕರು(ಪ್ರೌಢಶಿಕ್ಷಣ) ರವರು ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ವೃಂದದ ಅಂತಿಮ ಜೇಷ್ಠತಾ ಪಟ್ಟಿ ಪ್ರಕಟಿಸಿರುವ ದಿನಾಂಕ.07.04.2022

2.ಈ ಕಛೇರಿ ಪತ್ರ ಸಮ ಸಂಖ್ಯೆ ದಿನಾಂಕ.06.01.2022

*******

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಹಾಗೂ ಮೈಸೂರು ವಿಭಾಗದಲ್ಲಿನ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಗ್ರೂಪ್-ಬಿ ಖಾಲಿ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿ ನೀಡಲು ಉದ್ದೇಶಿಸಲಾಗಿದೆ. ಉಲ್ಲೇಖ(1) ರಂತೆ ಬೆಂಗಳೂರು ಮತ್ತು ಮೈಸೂರು ವಿಭಾಗದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರೇಡ್-2 ಪ್ರೌಢಶಾಲಾ ಸಹ ಶಿಕ್ಷಕರ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದೆ.

ಪ್ರಕಟಿಸಿರುವ ಜೇಷ್ಠತಾ ಪಟ್ಟಿಯನ್ನು ಅನುಸರಿಸಿ ಬೆಂಗಳೂರು/ಮೈಸೂರು ವಿಭಾಗದಲ್ಲಿ ಖಾಲಿ ಇರುವ ಮುಖ್ಯ ಶಿಕ್ಷಕರ/ತತ್ಸಮಾನ ವೃಂದದ ಹುದ್ದೆಗಳಿಗೆ ಬಡ್ತಿ ನೀಡುವ ಪ್ರಕ್ರಿಯೆ ಪ್ರಾರಂಭಿಸಲಾಗಿದೆ. ಈ ಪತ್ರದೊಂದಿಗೆ ಸರ್ಕಾರಿ ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಹುದ್ದೆಗಳಿಗೆ ಬಡ್ತಿ ನೀಡಬಹುದಾದ ಆದ್ಯತಾ ಪಟ್ಟಿಯನ್ನು ಇಲಾಖಾ ವೆಬ್ ಸೈಟ್ www.schooleducation.kar.nic.in ನಲ್ಲಿ ಪ್ರಕಟಿಸಲಾಗಿದೆ.

ಪಟ್ಟಿಯಲ್ಲಿರುವ ಶಿಕ್ಷಕರ ಅಗತ್ಯ ಮಾಹಿತಿಗಳನ್ನು ಚೆಕ್‌ಲಿಸ್ಟ್‌ನಲ್ಲಿ ಸಲ್ಲಿಸಲು ತಿಳಿಸಿದೆ.

1. ಹೆಚ್.ಆರ್.ಎಂ.ಎಸ್. ನಲ್ಲಿ ವೇತನ ಸೆಳೆಯುವ ಕೆ.ಜಿ.ಐ.ಡಿ. ಸಂಖ್ಯೆಯನ್ನೇ ಕಡ್ಡಾಯವಾಗಿ ಕಾಲಂ-2ರಲ್ಲಿ ನಮೂದಿಸಬೇಕು.(ಒಂದು ವೇಳೆ ಹೆಚ್.ಆರ್.ಎಂ.ಎಸ್.ನಲ್ಲಿ ವೇತನ ಸೆಳೆಯುವ ಕೆ.ಜಿ.ಐ.ಡಿ.ಸಂಖ್ಯೆ ಹಾಗೂ ಶಿಕ್ಷಕರ ಸೇವಾ ತಂತ್ರಾಂಶದಲ್ಲಿ(ಇ.ಇ.ಡಿ.ಎಸ್) ನಮೂದಿಸಿರುವ ಕೆ.ಜಿ.ಐ.ಡಿ.ಸಂಖ್ಯೆ ವ್ಯತ್ಯಾಸವಾಗಿದ್ದಲ್ಲಿ ಅಂತಹ ಪ್ರಕರಣಗಳಿಗೆ ಸಂಬಂಧಪಟ್ಟ ಉಪನಿರ್ದೇಶಕರೆ ನೇರ ಹೊಣೆಗಾರರಾಗಿರುತ್ತಾರೆ)
2. ಈ ಪಟ್ಟಿಯಲ್ಲಿನ ಶಿಕ್ಷಕರ ಮಾಹಿತಿಯು ಶಿಕ್ಷಕರ ಸೇವಾ ತಂತ್ರಾಂಶದಲ್ಲಿ(ಇ.ಇ.ಡಿಎಸ್) ಕಡ್ಡಾಯವಾಗಿ ನಮೂದಾಗಿರುವ ಬಗ್ಗೆ ಮಾಹಿತಿ ಸಲ್ಲಿಸುವುದು.
3. ಬಡ್ತಿ ಸಂಬಂಧ ಪ್ರಕಟಿಸಲಾಗಿರುವ ತಾತ್ಕಾಲಿಕ ಪಟ್ಟಿಯಲ್ಲಿನ ಎಲ್ಲಾ ಪ್ರೌಢಶಾಲಾ ಸಹ ಶಿಕ್ಷಕರುಗಳ ಬಗ್ಗೆ ಶಿಸ್ತುಕ್ರಮ/ಇಲಾಖಾ ವಿಚಾರಣೆ/ನ್ಯಾಯಾಲಯದಲ್ಲಿ ಬಾಕಿ ಇರುವ ಬಗ್ಗೆ ಸಂಬಂಧಿಸಿದ ಉಪನಿರ್ದೇಶಕರು(ಆಡಳಿತ) ದೃಢೀಕರಣವನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

ಮೇಲ್ಕಂಡ ವಿವರಗಳನ್ನು ಲಗತ್ತಿಸಿರುವ ಚೆಕ್‌ಲಿಸ್ಟ್‌ನಲ್ಲಿ ಮಾಹಿತಿಯನ್ನು ನಮೂದಿಸಿದ ಪ್ರಸ್ತಾವನೆಯನ್ನು ಸಂಬಂಧಿಸಿದ ಶಿಕ್ಷಕರುಗಳಿಂದ ಪಡೆದು ಜಿಲ್ಲಾವಾರು ಕ್ರೋಢೀಕರಿಸಿ, ಪ್ರತಿ ಶಿಕ್ಷಕರ ಬಡ್ತಿ ಪ್ರಸ್ತಾವನೆಯನ್ನು ಪ್ರತ್ಯೇಕ ಡೋಸಿಯರ್‌ಗಳಲ್ಲಿ ಸಿದ್ದಪಡಿಸಿ ಸಲ್ಲಿಸುವುದು. ಹಾಗೂ ಜೇಷ್ಠತಾ ಪಟ್ಟಿಯಲ್ಲಿ ಶಿಕ್ಷಕರ ಹೆಸರಿದ್ದು, ಆದ್ಯತಾ ಪಟ್ಟಿಯಲ್ಲಿ ಹೆಸರು ಬಿಟ್ಟಿರುವ ಪ್ರಕರಣಗಳಿದ್ದಲ್ಲಿ ಅಂತಹ ಶಿಕ್ಷಕರ ಪ್ರಸ್ತಾವನೆಗಳನ್ನೂ ಸಹ ಉಪನಿರ್ದೇಶಕರು(ಆಡಳಿತ) ರವರ ದೃಢೀಕರಣದೊಂದಿಗೆ ಈ ಕಛೇರಿಗೆ ದಿನಾಂಕ. 28.04.2022 ರೊಳಗಾಗಿ ಕಡ್ಡಾಯವಾಗಿ ಮುದ್ದಾಂ ಸಲ್ಲಿಸತಕ್ಕದ್ದು.

**ಡಾ.ರೂಪಶ್ರೀ.ಎಸ್, ಕೆ.ಎ.ಎಸ್**
**ಜಂಟಿ ನಿರ್ದೇಶಕರು(ಆಡಳಿತ)**

**ಗೆ,**

1.ಬೆಂಗಳೂರು ಮತ್ತು ಮೈಸೂರು ವಿಭಾಗದ ಎಲ್ಲಾ ಉಪನಿರ್ದೇಶಕರು(ಆಡಳಿತ)(ಅಭಿವೃದ್ಧಿ) ಸಾರ್ವಜನಿಕ ಶಿಕ್ಷಣ ಇಲಾಖೆ ರವರ ಮುಂದಿನ ಅಗತ್ಯ ಕ್ರಮಕ್ಕಾಗಿ.

2.ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಆಯುಕ್ತರ ಕಛೇರಿ, ಸಾ.ಶಿ.ಇ. ಬೆಂಗಳೂರು.

## ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರ ವೃಂದದಿಂದ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಗ್ರೂಪ್-ಬಿ ಹುದ್ದೆಗೆ ಬಡ್ತಿ ನೀಡುವ ಸಂಬಂಧ ಚೆಕ್ ಲಿಸ್ಟ್

| ಕ್ರಮ ಸಂಖ್ಯೆ | ಸೇವಾ ವಿವರದ ಚೆಕ್ ಲಿಸ್ಟ್ | ವಿವರಣೆ |
|---|---|---|
| 1 | ಜೇಷ್ಠತಾ ಸಂಖ್ಯೆ | |
| 2 | ಶಿಕ್ಷಕ/ಶಿಕ್ಷಕಿಯ ಹೆಸರು | |
| 3 | ಶಿಕ್ಷಕರ ಕೆ.ಜಿ.ಐ.ಡಿ ಸಂಖ್ಯೆ | |
| 4 | ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಶಾಲೆಯ ಹೆಸರು ಮತ್ತು ವಿಳಾಸ | |
| 5 | ಸೇವೆಗೆ ಸೇರಿ ದಿನಾಂಕ | |
| 6 | 2017-18 ರಿಂದ 2021-22ರ ಕಾರ್ಯ ನಿರ್ವಹಣಾ ವರದಿ [ಅಂಗೀಕಾರ ಷರದೊಂದಿಗೆ ಸಲ್ಲಿಸುವುದು] ಅಥವಾ ಈ ಹಿಂದೆ ಸಲ್ಲಿಸಿದ್ದಲ್ಲಿ ಅದರ ಒಂದು ಪ್ರತಿ ಸಲ್ಲಿಸುವುದು. | |
| 7 | ಶಿಸ್ತಿನ ಕ್ರಮ/ಇಲಾಖಾ ವಿಚಾರಣೆ ಬಾಕಿ ಇರುವ ಬಗ್ಗೆ. | |
| 8 | ಕನ್ನಡ ಭಾಷಾ ಪರೀಕ್ಷೆ ತೇರ್ಗಡೆ ಪಡೆದ ದಾಖಲೆಗಳ ಪ್ರತಿ ಹಾಗೂ ಇಲಾಖಾ ಪರೀಕ್ಷೆಗಳಾದ ಅಕೌಂಟ್ಸ್ ಹೈಯರ್, ಜನರಲ್ ಲಾ ಪಾರ್ಟ್-1 & 2 ಉತ್ತೀರ್ಣರಾದ ಪ್ರಮಾಣ ಪತ್ರ. | |
| 9 | ಹಿಂದಿ ಶಿಕ್ಷಕರಾದಲ್ಲಿ ಹಿಂದಿ ಶಿಕ್ಷಣ ಪಾರಂಗತ್, ತೇರ್ಗಡೆ ಹೊಂದಿರುವ ಹಾಗೂ ಬಿ.ಇಡಿ ಪದವಿಯ ಧೃಢೀಕರಣ ಪ್ರಮಾಣ ಪತ್ರಗಳು | |

[ಸಹಿ]
[ಕ್ಷೇತ್ರ ಶಿಕ್ಷಣಾಧಿಕಾರಿಗಳು]

[ಸಹಿ]
ಉಪನಿರ್ದೇಶಕರು [ಆಡಳಿತ]